# ಸ್ಪೀಕರ್ ಸರ್ಕಾರದ ಏಜೆಂಟ್

ದಿ: 20-7-19

ಸಂ.ಕ. ಸಮಾಚಾರ ಮೈಸೂರು

ಸ್ಪೀಕರ್ ರಮೇಶ್ ಕುಮಾರ್ ಅವರು ಕಾಂಗ್ರೆಸ್ ಹಾಗೂ ಸರ್ಕಾರದ ಏಜೆಂಟರಂತೆ ಕೆಲಸ ಮಾಡುತ್ತಿದ್ದಾರೆ ಎಂದು ಸಂಸದರು ಹಾಗು ಬಿಜೆಪಿಯ ನಾಯಕರೂ ಆದ ಶೋಭಾ ಕರಂದ್ಲಾಜೆ ವಾಗ್ದಾಳಿ ನಡೆಸಿವರು.

ಆಷಾಢ ಶುಕ್ರವಾರದ ನಿಮಿತ್ತ ಚಾಮುಂಡಿ ಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಲು ಬೆಟ್ಟ ಹತ್ತಿದ ವೇಳೆ ಸುದ್ದಿಗಾರರೊಡನೆ ಮಾತನಾಡಿದರು.

ರಾಜ್ಯ ಸರ್ಕಾರ ಸಂಪೂರ್ಣವಾಗಿ ನಿಷ್ಕ್ರಿಯವಾಗಿದೆ. ಬರ ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಇದ್ದರೂ ಕ್ರಮ ತೆಗೆದುಕೊಂಡಿಲ್ಲ. ಅನಿಶ್ಚಿತತೆಯ ಸನ್ನಿವೇಶದಲ್ಲೂ ಈ ಸರ್ಕಾರ ವರ್ಗಾವಣೆ ದಂಧೆಯಲ್ಲಿ ತೊಡಗಿದೆ ಎಂದು ಆರೋಪಿಸಿದರು. ಈ ಮಧ್ಯೆ, ಸರ್ಕಾರ ಅಲ್ಪಮತಕ್ಕೆ ಕುಸಿದಿದ್ದರೂ ಸಿಎಂ ರಾಜೀನಾಮೆ ಕೊಟ್ಟಿಲ್ಲ. ಕುರ್ಚಿಗೆ ಅಂಟಿಕೊಂಡಿರುವ ಕುಮಾರಸ್ವಾಮಿ ವಾಮಮಾರ್ಗದಿಂದ ಸರ್ಕಾರ ಮುಂದುವರೆಸುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಇನ್ನು, ಸ್ಪೀಕರ್ ಸಹಾ ಮೇಲೆ ಒತ್ತಡ ಹಾಕಿ ಕೆಲಸ ಮಾಡುತ್ತಿದ್ದು, ಈ ಸರ್ಕಾರ ಸುಪ್ರೀಂ ಕೋರ್ಟ್‌ಗೆ, ರಾಜ್ಯಪಾಲರಿಗೆ ಹಾಗೂ ಸಂವಿಧಾನಕ್ಕೆ ಗೌರವ ನೀಡುತ್ತಿಲ್ಲ. ಬದಲಾಗಿ ಪ್ರಜಾಪ್ರಭುತ್ವದ ವಿರುದ್ಧವಾಗಿ ಅಧಿಕಾರ ನಡೆಸುತ್ತಿದೆ ಎಂದರು.

ಜೊತೆಗೆ, ಶಾಸಕರನ್ನು ಕಿಡ್ನ್ಯಾಪ್ ಮಾಡಲು ಅವರೇನು ಚಿಕ್ಕ ಮಕ್ಕಳೇ ಎಂದು ಪ್ರಶ್ನಿಸಿ, ಸರ್ಕಾರದ ವಿರುದ್ಧ ಶಾಸಕರು ಇರುವುದರಿಂದಲೇ ಅವರು ಸ್ವ ಇಚ್ಛೆಯಿಂದ ಹೋಗಿದ್ದಾರೆ. ಇದನ್ನು ಸ್ವತಃ ಅವರೇ ಹೇಳಿದ್ದಾರೆ ಎಂದು ಬೊಟ್ಟುಮಾಡಿದರು.ಳಿಸಿದರು.